ಈ) ಮೈಸೂರು ಸಕ್ಕರೆ ಕಾರ್ಖಾನೆಯು ಈವರೆಗೆ ಉತ್ಪಾದಿಸಿರುವ ಸಕ್ಕರೆಯ ಪ್ರಮಾಣವೆಷ್ಟು?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು):

ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ- 34.

ಆ) 1999-2000ನೇ ಸಾಲಿಗೆ ಒಟ್ಟು ಉತ್ಪಾದನೆಯಾಗಬಹುದಾದ ಸಕ್ಕರೆಯ ಒಟ್ಟು ಪ್ರಮಾಣ 17.10 ಲಕ್ಷ ಟನ್.

ಇ) ಮೈಸೂರು ಸಕ್ಕರೆ ಕಾರ್ಖಾನೆಯು ಈವರೆಗೆ ಅಂದರೆ ದಿ:29.2.2000ದ ವರೆಗೆ ಒಟ್ಟು 5.78 ಲಕ್ಷ ಟನ್ ಕಬ್ಬನ್ನು ಅರೆದಿರುತ್ತದೆ.

ಈ) ಮೈಸೂರು ಸಕ್ಕರೆ ಕಾರ್ಖಾನೆಯ ಈವರೆಗೆ ಅಂದರೆ ದಿನಾಂಕ: 29.2.2000ರ ವರೆಗೆ ಒಟ್ಟು 0.53 ಲಕ್ಷ ಟನ್ ಸಕ್ಕರೆ ಉತ್ಪಾದಿಸಿದೆ.

ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿ.

3(137):

ಶ್ರೀ ಎಂ.ಎಸ್.ಆತ್ಮಾನಂದ (ಮಂಡ್ಯ): ಮಾನ್ಯ ಪ್ರವಾಸೋದ್ಯಮ ಹಾಗೂ ಹಜ್ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರ ತಿಳಿಸುವರೆ?

ಅ) ಮಂಡ್ಯ ಜಿಲ್ಲೆಯಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿಗೆ ಸರ್ಕಾರವು ತೆಗೆದುಕೊಂಡ ಕ್ರಮಗಳು ಯಾವುವು?

ಶ್ರೀ ಆರ್.ರೋಷನ್ ಬೇಗ್ (ಪ್ರವಾಸೋದ್ಯಮ ಹಾಗೂ ಹಜ್ ಸಚಿವರು):

ಅ) ಮಂಡ್ಯ ಜಿಲ್ಲೆಯಲ್ಲಿ ಒಟ್ಟು 17 ಪ್ರವಾಸೋದ್ಯಮ ಅಭಿವೃದ್ಧಿ ಯೋಜನೆಗಳನ್ನು ಹಾಕಿಕೊಳ್ಳಲಾಗಿತ್ತು ಇವುಗಳ ಅಂದಾಜು ವೆಚ್ಚವು ರೂ.356.52 ಲಕ್ಷಗಳು.

ಬೀಡಿ ಕಾರ್ಮಿಕರಿಗೆ ಸೌಲಭ್ಯ.

4(138)

ಶ್ರೀ ಆತ್ಮಾನಂದ.ಎಂ.ಎಸ್. (ಮಂಡ್ಯ): ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು